## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ವಿದ್ಯೋದಯ ಫೌಂಡೇಷನ್ ಇವರ ಮ್ಯಾಗ್ನಸ್ ಸ್ಕೂಲ್ ಆಫ್ ನರ್ಸಿಂಗ್, ಬೆಂಗಳೂರು ಈ ಶಾಲೆಯನ್ನು ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡುವ ಬಗ್ಗೆ.

------

**ಓದಲಾಗಿದೆ:**

ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಶೂಶುಷಾ ಪರಿಷತ್ತು ಇವರ ಪತ್ರ ಸಂಖ್ಯೆ:ಕರಾಶುಪ/1189/2019-20.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು, ಬೆಂಗಳೂರು ಇವರು ವಿದ್ಯೋದಯ ಫೌಂಡೇಷನ್ ಇವರ ಮ್ಯಾಗ್ನಸ್ ಸ್ಕೂಲ್ ಆಫ್ ನರ್ಸಿಂಗ್, ನಂ.36, ವಿನಾಯಕ ನಗರ ಬಡಾವಣೆ, ಚಿನ್ನಮಂಗಲ ವಿಲೇಜ್, ನೆಲಮಂಗಲ ತಾಲ್ಲೂಕು, ಬೆಂಗಳೂರು-562123 ಈ ಶಾಲೆಯನ್ನು 60 ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೊಮಾ ಇನ್ ನರ್ಸಿಂಗ್ ಕೋರ್ಸಿನೊಂದಿಗೆ ಹೊಸದಾಗಿ ಪ್ರಾರಂಭಿಸಲು ಶಾಲೆಯು ಹೊಂದಿರುವ ಮೂಲಭೂತ ಸೌಲಭ್ಯಗಳ ಬಗ್ಗೆ ತಪಾಸಣೆ ನಡೆಸಲು ತಪಾಸಣಾ ತಂಡವನ್ನು ರಚಿಸಲಾಗಿತ್ತದೆಂದು ತಿಳಿಸಿ, ತಪಾಸಣಾ ತಂಡವು ಸದರಿ ಶಾಲೆಯಲ್ಲಿ ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿಶೀಲಿಸಿ ಮಾಡಿರುವ ಶಿಫಾರಸ್ಸಿನನ್ವಯ ಸದರಿ ಶಾಲೆಯ ಪ್ರವೇಶಮಿತಿಯನ್ನು ಹೆಚ್ಚಿಸಲು ಮಂಜೂರಾತಿ ನೀಡಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, 2019-20 ನೇ ಸಾಲಿನಿಂದ ವಿದ್ಯೋದಯ ಫೌಂಡೇಷನ್ ಇವರ ಮ್ಯಾಗ್ನಸ್ ಸ್ಕೂಲ್ ಆಫ್ ನರ್ಸಿಂಗ್, ನಂ.36, ವಿನಾಯಕ ನಗರ ಬಡಾವಣೆ, ಚಿನ್ನಮಂಗಲ ವಿಲೇಜ್, ನೆಲಮಂಗಲ ತಾಲ್ಲೂಕು, ಬೆಂಗಳೂರು - 562123 ಈ ಶಾಲೆಯನ್ನು 60 ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೊಮಾ ಇನ್ ನರ್ಸಿಂಗ್ ಕೋರ್ಸಿನೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಿ ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಎಂಇಡಿ 473 ಎಂಎಂಸಿ 2019, ಬೆಂಗಳೂರು, ದಿನಾಂಕ: 16-10-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಮೇರೆಗೆ, 2019-20 ನೇ ಸಾಲಿನಿಂದ ವಿದ್ಯೋದಯ ಫೌಂಡೇಷನ್ ಇವರ ಮ್ಯಾಗ್ನಸ್ ಸ್ಕೂಲ್ ಆಫ್ ನರ್ಸಿಂಗ್, ನಂ.36, ವಿನಾಯಕ ನಗರ ಬಡಾವಣೆ, ಚಿನ್ನಮಂಗಲ ವಿಲೇಜ್, ನೆಲಮಂಗಲ ತಾಲ್ಲೂಕು, ಬೆಂಗಳೂರು-562123 ಈ ಶಾಲೆಯನ್ನು 60 (ಅರವತ್ತು) ಸೀಟುಗಳ ಪ್ರವೇಶಮಿತಿಯುಳ್ಳ ಡಿಪ್ಲೊಮಾ ಇನ್ ನರ್ಸಿಂಗ್ ಕೋರ್ಸಿನೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಮಂಜೂರಾತಿ ನೀಡಿ ಆದೇಶಿಸಿದೆ.

### ಷರತ್ತು ಮತ್ತು ನಿಬಂಧನೆಗಳು

1. ಸದರಿ ಸಂಸ್ಥೆಯು ಮೇಲ್ಕಂಡಂತೆ ಮಂಜೂರಾಗಿರುವ ಸೀಟುಗಳ ಪೈಕಿ ಶೇ.10 ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಕರ್ನಾಟಕ ರಾಜ್ಯ ನರ್ಸಿಂಗ್ ಪರಿಷತ್‌ನ ಮಂಜೂರಾತಿಯನ್ನು ಪಡೆಯತಕ್ಕದ್ದು.
3. ಕರ್ನಾಟಕ ರಾಜ್ಯ ನರ್ಸಿಂಗ್ ಪರಿಷತ್ ಇವರು ನಿಗದಿಪಡಿಸಿರುವ ಪಠ್ಯಕ್ರಮ ಮತ್ತು ಮಿಡ್‌ವೈಫ್ ಹಾಗೂ ನರ್ಸಿಂಗ್ ಪರೀಕ್ಷಾ ಮಂಡಳಿಯ ಕಾರ್ಯ ಯೋಜನೆಯನ್ನು ಪಾಲಿಸತಕ್ಕದ್ದು.
4. ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಹೊಂದತಕ್ಕದ್ದು.
5. ಸದರಿ ಶಾಲೆಯು ಮುಂದಿನ 05 ವರ್ಷಗಳ ಕಾಲಮಿತಿಯೊಳಗೆ ಸ್ವಂತ ಆಸ್ಪತ್ರೆ ಹಾಗೂ ಸ್ವಂತ ಕಟ್ಟಡವನ್ನು ಹೊಂದಿರತಕ್ಕದ್ದು.

6. ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ರಾಜ್ಯ ಸರ್ಕಾರ ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
7. 2003 ರ ಕರ್ನಾಟಕ ಡಿಪ್ಲೊಮಾ ಇನ್ ಜನರಲ್ ನರ್ಸಿಂಗ್, ಮಿಡ್‌ವೈಫರಿ: ಸೈಕಿಯಾಟ್ರಿ ಕೋರ್ಸುಗಳ ಪವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿಯ ಪಕಾರ ಹಾಗೂ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಹೊರಡಿಸುವ ಪವೇಶ ನಿಯಮಾವಳಿಯನ್ವಯ ನಿಗದಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದ್ದಲ್ಲಿ 1991 ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
8. ಮೇಲ್ಕಂಡ ಸಂಸ್ಥೆಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಸಂಸ್ಥೆಯಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಮೇಲ್ಕಂಡ ಯಾವುದೇ ಷರತ್ತನ್ನು ಕಾಲೇಜು ಉಲ್ಲಂಘಿಸಿದಲ್ಲಿ, ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಜ್ಯೋತಿಪ್ರಕಾಶ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

**ಇವರಿಗೆ:**

1. ಮುಖ್ಯ ಕಾರ್ಯನಿರ್ವಹಣಾ ನಿರ್ದೇಶಕರು, ಕರ್ನಾಟಕ ನರ್ಸಿಂಗ್ ಮತ್ತು ಅರೆ ವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ ಹಾಗೂ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಆನಂದರಾವ್ ವೃತ್ತ, ಬೆಂಗಳೂರು.
2. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ನರ್ಸಿಂಗ್ ಕೌನ್ಸಿಲ್, ಸೂರ್ಯ ಅಪಾರ್ಟ್‌ಮೆಂಟ್ಸ್, ಗಾಂಧೀನಗರ, ಬೆಂಗಳೂರು-560009
3. ಅಧ್ಯಕ್ಷರು/ಪ್ರಾಂಶುಪಾಲರು, ವಿದ್ಯೋದಯ ಫೌಂಡೇಷನ್ ಇವರ ಮ್ಯಾಗ್ನಸ್ ಸ್ಕೂಲ್ ಆಫ್ ನರ್ಸಿಂಗ್, ನಂ.36, ವಿನಾಯಕ ನಗರ ಬಡಾವಣೆ, ಚಿನ್ನಮಂಗಲ ವಿಲೇಜ್, ನೆಲಮಂಗಲ ತಾಲ್ಲೂಕು, ಬೆಂಗಳೂರು-562123.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.